## ಕರ್ನಾಟಕ ಸರ್ಕಾರ

ಸಂಖ್ಯೆ:ಗ್ರಾಅಪ:140:ಆರ್‌ಆರ್‌ಸಿ:18.

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿ ಕಟ್ಟಡ
ಬೆಂಗಳೂರು, ದಿನಾಂಕ:09.07.2018.

## ಸುತ್ತೋಲೆ

**ವಿಷಯ** ಕರಾವಳಿ ಮತ್ತು ಮಲೆನಾಡು ಜಿಲ್ಲೆಗಳಲ್ಲಿ ಮಳೆಯಿಂದ ಹಾನಿಗೊಳಗಾಗುವ ಗ್ರಾಮೀಣ ರಸ್ತೆ ಮತ್ತು ಸೇತುವೆಗಳನ್ನು ತುರ್ತಾಗಿ ದುರಸ್ತಿ ಮಾಡಿ ಸಾರ್ವಜನಿಕರ ಸುಗಮ ಸಂಚಾರಕ್ಕೆ ಅನುಕೂಲ ಮಾಡುವ ಕುರಿತು.

**ಉಲ್ಲೇಖ** 1. ಸರ್ಕಾರದ ಸುತ್ತೋಲೆ ಸಂ:ಗ್ರಾಅಪ:140:ಆರ್‌ಆರ್‌ಸಿ:18 ದಿನಾಂಕ:12-6-2018

2. ಮಾನ್ಯ ಕಂದಾಯ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ರವರ ನಡವಳಿ ದಿನಾಂಕ: 28-6-2018

2017-18ನೇ ಸಾಲಿನಲ್ಲಿ ಬಿದ್ದ ಭಾರಿ ಮಳೆಯಿಂದ ಹಾನಿಗೊಳಗಾಗುವ ಗ್ರಾಮೀಣ ರಸ್ತೆ ಮತ್ತು ಸೇತುವೆಗಳ ವಿವರಗಳನ್ನು ಪಡೆದು ಅವುಗಳನ್ನು ದುರಸ್ತಿಪಡಿಸಲು ತುರ್ತು ಕ್ರಮಗಳನ್ನು ಕೈಗೊಂಡು ಜನ ಸಂಚಾರಕ್ಕೆ ಯಾವುದೇ ತೊಂದರೆಯುಂಟಾಗದಂತೆ ಈ ಕೆಳಗಿನ ರೀತಿಯಲ್ಲಿ ಅನುದಾನವನ್ನು ಒದಗಿಸಿಕೊಂಡು

1. ಜಿಲ್ಲಾ ಪಂಚಾಯಿತಿಗೆ ಲಿಂಕ್ ಡಾಕ್ಯೂಮೆಂಟ್‌ನಲ್ಲಿ ಲೆಕ್ಕಶೀರ್ಷಿಕೆ:3054ರಡಿ, ಒದಗಿಸಿರುವ ಅನುದಾನವನ್ನು ಪ್ರಥಮ ಆಧ್ಯತೆಯನ್ನಾಗಿ ಬಳಸಿಕೊಳ್ಳುವುದು.
2. ಮಳೆಯಿಂದ ಹಾನಿಗೊಳಗಾಗಿ ತುರ್ತಾಗಿ ದುರಸ್ತಿ ಮಾಡಬೇಕಾದ ರಸ್ತೆ ಮತ್ತು ಸೇತುವೆಗಳ ವಿವರಗಳನ್ನು ಜಿಲ್ಲಾಧಿಕಾರಿಗಳಿಗೆ ಸಲ್ಲಿಸಿ ಪ್ರಕೃತಿ ವಿಕೋಪ ಪರಿಹಾರ ನಿಧಿಯಡಿ ಲಭ್ಯವಿರುವ ಅನುದಾನವನನು ಬಳಸಿಕೊಳ್ಳುವುವುದು.
3. ಜಿಲ್ಲಾ ಪಂಚಾಯಿತಿಗಳಿಗೆ ಒದಗಿಸುವ ವಿಶೇಷ ಅನುದಾನವನ್ನು ಸಹ ಈ ತುರ್ತು ಸೇವೆಗಳಿಗೆ ಬಳಸಿಕೊಂಡು

ಅಗತ್ಯ ಕ್ರಮ ವಹಿಸುವಂತೆ ಈಗಾಗಲೇ ಉಲ್ಲೇಖ-1ರ ಸುತ್ತೋಲೆಯಲ್ಲಿ ಸೂಚಿಸಲಾಗಿದೆ.

ಮಾನ್ಯ ಕಂದಾಯ ಸಚಿವರು ದಿನಾಂಕ:14-6-2018ರಂದು ದಕ್ಷಿಣ ಕನ್ನಡ ಜಿಲ್ಲೆ ಮತ್ತು ಉಡುಪಿ ಜಿಲ್ಲೆಗಳ ಪರಿಶೀಲನೆ ನಡೆಸಿದ ಸಮಯದಲ್ಲಿ ಇತ್ತೀಚ್ಚೆಗೆ ಬಿದ್ದ ಭಾರಿ ಮಳೆಯಿಂದಾಗಿ ಜಾನುವಾರು ಹಾಗೂ ಸಾರ್ವಜನಿಕ ಆಸ್ತಿ-ಪಾಸ್ತಿಗಳಿಗೆ ಸಾಕಷ್ಟು ಹಾನಿಯಾಗಿ ಜನಜೀವನಕ್ಕೆ ತೊಂದರೆಯಾಗುತ್ತಿರುವುದನ್ನು ಗಮನಿಸಿರುತ್ತಾರೆ. ಆದ್ದರಿಂದ, ಮುಂಗಾರು ಅವಧಿಯಲ್ಲಿ ಅತೀ ಹೆಚ್ಚು ಮಳೆಯಾಗುವ ಜಿಲ್ಲೆಗಳ ವ್ಯಾಪ್ತಿಯಲ್ಲಿ ಅಗತ್ಯವಿರುವೆಡೆ ರಸ್ತೆ ಮತ್ತು ಸೇತುವೆಗಳ ತುರ್ತು ದುರಸ್ತಿಗೆ ಮುಂಜಾಗ್ರತಾ ಕ್ರಮ ವಹಿಸುವಂತೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರನ್ನು ಉಲ್ಲೇಖ-2ರಲ್ಲಿ ಕೋರಿರುತ್ತಾರೆ.

ಈ ಹಿನ್ನಲೆಯಲ್ಲಿ ಕರಾವಳಿ, ಮಲೆನಾಡು ಮತ್ತು ರಾಜ್ಯದ ಕೆಲವು ಭಾಗಗಳಲ್ಲಿ ಅತಿ ಹೆಚ್ಚು ಮಳೆ ಬೀಳುತ್ತಿದ್ದು, ಸಂಭವನೀಯ ದುರಂತ ಹಾಗೂ ಸಾರ್ವಜನಿಕ ಆಸ್ತಿಪಾಸ್ತಿಗಳಿಗೆ ಆಗಬಹುದಾದ ಹಾನಿಗಳನ್ನು ತಪ್ಪಿಸುವ ಸಲುವಾಗಿ ಜಿಲ್ಲೆಯ ಎಲ್ಲಾ ರಸ್ತೆ ಮತ್ತು ಸೇತುವೆಗಳ ಪರಿಶೀಲನೆ ನಡೆಸಿ ಶಿಥಿಲಗೊಂಡಿದ್ದಲ್ಲಿ ಅವುಗಳನ್ನು ದುರಸ್ತಿಗೊಳಿಸುವ ಹಾಗೂ ಪರ್ಯಾಯ ಸಂಪರ್ಕ ಕಲ್ಪಿಸಲು ಉಲ್ಲೇಖ-1 ರಲ್ಲಿ (ಪ್ರತಿ ಲಗತ್ತಿಸಿದೆ) ಈಗಾಗಲೇ ಸೂಚಿಸಿರುವಂತೆ ಕ್ರಮ ವಹಿಸಿ ಯಾವುದೇ ಅಹಿತಕರ ಘಟನೆ ಸಂಭವಿಸದಂತೆ, ಮುನ್ನೆಚ್ಚರಿಕೆ ಕ್ರಮ ವಹಿಸಲು ಕೋರಿದೆ.

(ಡಾ. ಎನ್. ನಾಗಾಂಬಿಕಾ ದೇವಿ)
ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

**ಪ್ರತಿಯನ್ನು ಸೂಕ್ತ ಕ್ರಮಕ್ಕಾಗಿ :**

1. ಎಲ್ಲಾ ಜಿಲ್ಲೆಯ ಜಿಲ್ಲಾಧಿಕಾರಿಗಳು
2. ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು
3. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ
4. ಕಾರ್ಯಪಾಲಕ ಇಂಜಿನಿಯರ್, ಎಲ್ಲಾ ಪಂ.ರಾಜ್ ಇಂಜಿನಿಯರಿಂಗ್ ವಿಭಾಗಳು
5. ಎಲ್ಲಾ ತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು
6. ಎಲ್ಲಾ ತಾಲ್ಲೂಕುಗಳ ಪಂ.ರಾಜ್ ಇಂಜಿನಿಯರಿಂಗ್ ಉಪ ವಿಭಾಗಗಳ ಸಹಾಯಕ ಕಾರ್ಯಪಾಲಕ ಇಂಜಿನಿಯರ್‌ಗಳು.
7. ಸಂಪಾದಕರು, ಕರ್ನಾಟಕ ವಿಕಾಸ ಇವರಿಗೆ ಮುಂದಿನ ಸಂಚಿಕೆಯಲ್ಲಿ ಪ್ರಕಟಿಸಲು
8. ನಿರ್ದೇಶಕರು, ವಾರ್ತಾ ಮತ್ತು ಪ್ರಚಾರ ಇಲಾಖೆ, ಬೆಂಗಳೂರು.

**ಪ್ರತಿಯನ್ನು ಗೌರವಪೂರ್ವಕವಾಗಿ :**

1. ಮಾನ್ಯ ಮುಖ್ಯ ಮಂತ್ರಿಗಳ ಅಪರ ಮುಖ್ಯ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು
2. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಹಾಗೂ ಶಾಸನ ರಚನಾ ಸಚಿವರ ಆಪ್ತ ಕಾರ್ಯದರ್ಶಿಗಳು, ಬೆಂಗಳೂರು.
3. ಮಾನ್ಯ ಕಂದಾಯ ಸಚಿವರ ಆಪ್ತ ಕಾರ್ಯದಶಿಗಳು, ವಿಧಾನ ಸೌಧ, ಬೆಂಗಳೂರು
4. ಮುಖ್ಯ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ ಇವರ ಆಪ್ತ ಕಾರ್ಯದಶಿಗಳು, ವಿಧಾನಸೌಧ, ಬೆಂಗಳೂರು.
5. ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರು ಇವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು
6. ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು
7. ಪ್ರಧಾನ ಕಾರ್ಯದರ್ಶಿಗಳು, ಕಂದಾಯ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು, ಬೆಂಗಳೂರು
8. ಕಾರ್ಯದರ್ಶಿಗಳು, ಕಂದಾಯ (ವಿಪತ್ತು ಪರಿಹಾರ) ಇಲಾಖೆ ಬೆಂಗಳೂರು.
9. ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು, ಬಹುಮಹಡಿ ಕಟ್ಟಡ ಬೆಂಗಳೂರು.
10. ಅಧೀನ ಕಾರ್ಯದರ್ಶಿಗಳು (ವೆಚ್ಚ-6), ಜಿ.ಪಂ. ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
11. ರಕ್ಷಾ ಕಡತ / ಹೆಚ್ಚುವರಿ ಪ್ರತಿ.